# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 922 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22.02.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ವತಿಯಿಂದ ರಾಜ್ಯದಲ್ಲಿ ವಿಜ್ಞಾನ ನಗರ (Science City) ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ನಗರಗಳಲ್ಲಿ ವಿಜ್ಞಾನ ನಗರಗಳನ್ನು ನಿರ್ಮಿಸಲು ಸರ್ಕಾರ ಯೋಜಿಸಿದೆ; | ಹೌದು.<br><br>ಬೆಂಗಳೂರಿನಲ್ಲಿ ವಿಜ್ಞಾನ ನಗರವನ್ನು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಸ್ಥಾಪಿಸುವ ಯೋಜನೆಯು ಆಯವ್ಯಯ 2024-25 ರಲ್ಲಿ ಘೋಷಣೆಯಾಗಿರುತ್ತದೆ. |
| ಆ) | ಕೇಂದ್ರ ಸರ್ಕಾರದಿಂದ ವಿಜ್ಞಾನ ನಗರಗಳನ್ನು ನಿರ್ಮಿಸಲು ಮಾನದಂಡನೆಗಳನ್ನು ರೂಪಿಸಿದ್ದು, ಸದರಿ ಮಾನದಂಡನೆಗಳನ್ನು ರಾಜ್ಯದಲ್ಲಿ ಮುಂಬರುವ ದಿನಗಳಲ್ಲಿ ವಿಜ್ಞಾನ ನಗರ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗುವುದೇ; ಈ ಕುರಿತು ಕೇಂದ್ರ ಸರ್ಕಾರದಿಂದ ಅನುದಾನ ಪಡೆಯಲು ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು) | ಹೌದು.<br><br>ಬೆಂಗಳೂರಿನಲ್ಲಿ ವಿಜ್ಞಾನ ನಗರವನ್ನು ಸ್ಥಾಪಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಸಂಸ್ಕೃತಿ ಮಂತ್ರಾಲಯದ SPOCS ಮಾರ್ಗಸೂಚಿಯಂತೆ 25 ಎಕರೆ ಭೂಮಿಯನ್ನು ಗುರುತಿಸಿ ವಿಸ್ತೃತ ಯೋಜನಾ ವರದಿ (DPR) ಯನ್ನು ಸಲ್ಲಿಸಲಾಗುವುದು. ಸದರಿ ಮಾರ್ಗಸೂಚಿಯನ್ವಯ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ವಿಜ್ಞಾನ ನಗರವನ್ನು ಸ್ಥಾಪಿಸಲು ಕ್ರಮಕೈಗೊಳ್ಳಲಾಗುವುದು. |

| | | |
|---|---|---|
| ಇ) | ವಿಜ್ಞಾನ ಮತ್ತು ತಂತ್ರಜ್ಞಾನ ನಗರವನ್ನು ಸ್ಥಾಪಿಸುವುದರಿಂದ ಹಲವು ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ತಂತ್ರಜ್ಞಾನದ ಅರಿವು ಮತ್ತು ಆವಿಷ್ಕಾರಗಳನ್ನು ಮಾಡಲು ಸರ್ಕಾರ ಪ್ರೇರೆಪಿಸಲು ಕೈಗೊಂಡಿರುವ ಕ್ರಮಗಳೇನು? | ವೈಜ್ಞಾನಿಕ ಬೆಳವಣಿಗೆಗಳಿಂದ ಹೊಸ ಜ್ಞಾನದ ಹೊರಹೊಮ್ಮುವಿಕೆಯು ಕಳೆದ 3-4 ದಶಕಗಳಲ್ಲಿ ಅಭೂತಪೂರ್ವ ಬೆಳವಣಿಗೆಯನ್ನು ಕಂಡಿದೆ. ಆದ್ದರಿಂದ, ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳ ಕುರಿತು ಕಲಿಕೆಯ ವಾತಾವರಣವನ್ನು ಒದಗಿಸುವ ಜೊತೆಗೆ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಉದ್ದೇಶದಿಂದ ವಿಜ್ಞಾನ ನಗರವನ್ನು ಸ್ಥಾಪಿಸುವುದು. ಒಟ್ಟಾರೆಯಾಗಿ ಸಮಾಜದಲ್ಲಿ ಸೃಜನಶೀಲ ಪ್ರತಿಭೆ ಮತ್ತು ವೈಜ್ಞಾನಿಕ ಮನೋಭಾವವನ್ನು ಬೆಳೆಸಲು, ಜ್ಞಾನ ಆಧಾರಿತ ಸಮಾಜದ ಅಭಿವೃದ್ಧಿಯ ಉದ್ದೇಶವನ್ನು ಹೊಂದಿದೆ. ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರಿಗೆ ಅತ್ಯುತ್ತಮ ಶೈಕ್ಷಣಿಕ ಮತ್ತು ಸಂಪನ್ಮೂಲ ಕೇಂದ್ರವಾಗಿ ಸೇವೆ ಸಲ್ಲಿಸಲು ಮತ್ತು ಅವರ ವೈಜ್ಞಾನಿಕ ಜ್ಞಾನವನ್ನು ವೃದ್ಧಿಗೊಳಿಸಲು ಅನೌಪಚಾರಿಕ ವಿಜ್ಞಾನ ಶಿಕ್ಷಣವನ್ನು ಎಲ್ಲಾ ವಯಸ್ಸಿನ ಜನರಿಗೆ ತಲುಪಿಸಲು ವಿಜ್ಞಾನ ನಗರದ ಸ್ಥಾಪನೆಯ ಮೂಲಕ ಕ್ರಮಕೈಗೊಳ್ಳಲಾಗುವುದು. |

**ಐಟಿಬಿಟಿ 30 ಎಸ್ ಟಿಎಸ್ 2024**

**(ಎನ್.ಎಸ್.ಬೋಸರಾಜು)**
ಮಾನ್ಯ ಸಣ್ಣ ನೀರಾವರಿ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ
ಸಚಿವರು.